# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1255 |
| ಉತ್ತರಿಸಬೇಕಾದ ದಿನಾಂಕ | : 21.12.2018. |
| ಸದಸ್ಯರ ಹೆಸರು | : ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ಸಚಿವರು | : ಮಾನ್ಯ ಉಪ ಮುಖ್ಯಮಂತ್ರಿಗಳು |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ಮಂಡ್ಯ ನಗರದಲ್ಲಿ ನಿರ್ಮಾಣವಾಗುತ್ತಿರುವ ಒಳಾಂಗಣ ಕ್ರೀಡಾಂಗಣದ ಅಂದಾಜು ಮೊತ್ತ ಎಷ್ಟು; | ಮಂಡ್ಯ ನಗರದಲ್ಲಿ ನಿರ್ಮಾಣಗೊಂಡಿರುವ ಒಳಾಂಗಣ ಕ್ರೀಡಾಂಗಣದ ಕಾಮಗಾರಿಗಳನ್ನು ವಿವಿಧ ಹಂತಗಳಲ್ಲಿ ಕೈಗೊಳ್ಳಲಾಗಿದ್ದು, ಒಟ್ಟು ಅಂದಾಜು ವೆಚ್ಚ ರೂ.320.00 ಲಕ್ಷ ಆಗಿರುತ್ತದೆ. |
| ಆ) | ಟೆಂಡರ್‌ನ್ನು ಯಾವಾಗ ಕರೆಯಲಾಗಿದೆ. ಟೆಂಡರ್ ಪಡೆದ ಗುತ್ತಿಗೆದಾರರು ಯಾರು; | ಮಂಡ್ಯ ನಗರದ ಒಳಾಂಗಣ ಕ್ರೀಡಾಂಗಣದ ನಿರ್ಮಾಣಕ್ಕೆ ಟೆಂಡರ್ ಆಹ್ವಾನಿಸಲಾಗಿರುವುದಿಲ್ಲ. ನಿರ್ಮಾಣ ಸಂಸ್ಥೆಯಾದ ನಿರ್ಮಿತಿ ಕೇಂದ್ರ, ಮಂಡ್ಯ ಈ ಸಂಸ್ಥೆಯು ಈ ಕಾಮಗಾರಿಯನ್ನು ನಿರ್ವಹಿಸುತ್ತಿದೆ. |
| ಇ) | ಈ ಕಾಮಗಾರಿ ಆರಂಭವಾದ ದಿನಾಂಕ ಯಾವುದು; | ದಿನಾಂಕ: 10-07-2009 ರಂದು ಕಾಮಗಾರಿಯನ್ನು ಆರಂಭಿಸಲಾಗಿದೆ. |
| ಈ) | ಈ ಕ್ರೀಡಾಂಗಣದ ಕಾಮಗಾರಿಯು ಮಂದಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಉ) | ಬಂದಿದ್ದಲ್ಲಿ, ತ್ವರಿತವಾಗಿ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ಮಂಡ್ಯ ನಗರದ ಒಳಾಂಗಣ ಕ್ರೀಡಾಂಗಣದ ಕಾಮಗಾರಿಯು ಪೂರ್ಣಗೊಂಡಿದ್ದು, ದಿನಾಂಕ: 12-03-2018 ರಂದು ಉದ್ಘಾಟನೆಯಾಗಿರುತ್ತದೆ. ಪ್ರಸ್ತುತ ಒಳಾಂಗಣ ಕ್ರೀಡಾಂಗಣದ ನೆಲಹಾಸು ಅಳವಡಿಸುವ ಕಾಮಗಾರಿಯು ಅಂತಿಮ ಹಂತದಲ್ಲಿದ್ದು, ಶೀಘ್ರದಲ್ಲಿ ಕ್ರೀಡಾಪಟುಗಳ ಬಳಕೆಗೆ ಮುಕ್ತಗೊಳಿಸಲಾಗುವುದು. |
| ಊ) | ಯಾವಾಗ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು? | ಒಳಾಂಗಣ ಕ್ರೀಡಾಂಗಣದ ನಿರ್ಮಾಣ ಕಾಮಗಾರಿ ಪೂರ್ಣಗೊಂಡಿದ್ದು, ಒಂದು ತಿಂಗಳ ಒಳಗೆ ಮರದ ನೆಲಹಾಸು ಕಾಮಗಾರಿಯನ್ನು ಪೂರ್ಣಗೊಳಿಸಿ, ಕ್ರೀಡಾಪಟುಗಳು ಮತ್ತು ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸಲಾಗುವುದು. |

ಸಂಖ್ಯೆ: ಯುಸೇಇ 99 ಯುಸೇಭಾ 2018.

(ಡಾ|| ಜಿ. ಪರಮೇಶ್ವರ)
ಉಪ ಮುಖ್ಯಮಂತ್ರಿ.